ಬೆಂಗಳೂರು ವ್ಯಾಪ್ತಿಯಲ್ಲಿರುವ ಸಹಕಾರ ಸಂಘಗಳು ಮತ್ತು ಬ್ಯಾಂಕ್‌ಗಳು

279 (649) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಸಹಕಾರ ಸಂಘಗಳು ; ಸಹಕಾರ ಬ್ಯಾಂಕುಗಳ ಸಂಖ್ಯೆ ಎಷ್ಟು ;

ಆ) ಆ ಪೈಕಿ, ಎಷ್ಟು ಸಹಕಾರ ಸಂಘಗಳು ; ಬ್ಯಾಂಕುಗಳು ಪ್ರತಿವರ್ಷ ಸರ್ವ ಸದಸ್ಯರ ಸಭೆಯನ್ನು ನಡೆಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಸಹಕಾರ ಸಂಸ್ಥೆ : ಬ್ಯಾಂಕುಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು) ?

ಶ್ರೀ ಲಕ್ಷ್ಮಣ ಸ. ಸವದಿ (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು):

ಅ) ಸಹಕಾರ ಸಂಘಗಳು – 1850

ಸಹಕಾರ ಬ್ಯಾಂಕುಗಳು – 41

ಆ) ಈ ಪೈಕಿ 36 ಸಹಕಾರ ಸಂಘಗಳು ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ನಡೆಸಿರುವುದಿಲ್ಲ. ಇವುಗಳಲ್ಲಿ 34 ಸಹಕಾರ ಸಂಘಗಳು ವಾರ್ಷಿಕ ಮಹಾಸಭೆಯ ಮುಂದೂಡಿಕೆಗೆ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದಿವೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಎಲ್ಲಾ ಸಹಕಾರ ಬ್ಯಾಂಕುಗಳು ವಾರ್ಷಿಕ ಮಹಾಸಭೆ ನಡೆಸಿರುತ್ತವೆ.

ಇ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಈ ಕೆಳಕಂಡ ಎರಡು ಸಹಕಾರ ಸಂಘಗಳು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 27ರ ರೀತ್ಯಾ 2009–10ನೇ ಸಾಲಿನ ವಾರ್ಷಿಕ ಮಹಾಸಭೆ

ನಡೆಸಿರುವುದಿಲ್ಲ. ಅವುಗಳ ವಿರುದ್ಧ ತೆಗೆದುಕೊಂಡ ಕ್ರಮಗಳ ವಿವರಗಳನ್ನು ಈ ಕೆಳಗಿನಂತೆ ವಿವರಿಸಲಾಗಿದೆ.

ಸಹಕಾರ ಸಂಘದ ಹೆಸರು	ತೆಗೆದುಕೊಂಡ ಕ್ರಮ
1. ಸಮ್ಮನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘ ನಿ., ಆನೇಕಲ್ ತಾಲ್ಲೂಕು	ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ ಪ್ರಕರಣ 27(2) ರನ್ವಯ 1000/–ಗಳ ದಂಡ ವಿಧಿಸಲಾಗಿದೆ.
2. ಶಾಂತಿನಗರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ, ಬೆಂಗಳೂರು	ಈ ಸಂಘದ ಅಧ್ಯಕ್ಷರ ವಿರುದ್ಧ ಸಹಕಾರ ಸಂಘಗಳ ಅಧಿನಿಯಮದ ಪ್ರಕರಣ 29ಸಿ ಅಡಿಯಲ್ಲಿ ಕ್ರಮ ತೆಗೆದುಕೊಂಡಿದ್ದು ಆದೇಶವನ್ನು ಕಾಯ್ದಿರಿಸಲಾಗಿದೆ.

ಬಾಗೇಪಲ್ಲಿ ಕ್ಷೇತ್ರದ ರಸ್ತೆ ಅಭಿವೃದ್ಧಿ

280 (290) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಮುಖ್ಯ ರಸ್ತೆಯಲ್ಲಿ ಜಾಗವನ್ನು ಅಗಲೀಕರಣ ಮಾಡಿರುವುದು ನಿಜವೇ ;

ಆ) ಹಾಗಿದ್ದಲ್ಲಿ, ಹಲವಾರು ತಿಂಗಳುಗಳು ಕಳೆದಿದ್ದರೂ ಸಹ ಇಲ್ಲಿನ ತ್ಯಾಜ್ಯ ವಸ್ತುಗಳನ್ನು, ಕಂಬಗಳನ್ನು ಬೇರೆ ಕಡೆಗೆ ಸಾಗಿಸದಿರುವುದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;